# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 858 |
| ಸದಸ್ಯರ ಹೆಸರು | : | ಡಾ: ಧನಂಜಯ ಸರ್ಜಿ<br>(ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.12.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಎಷ್ಟು; ಎಷ್ಟು ಶಾಲೆಗಳಲ್ಲಿ ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿದೆ; ಹಾಗೂ ಶಾಲೆಗಳ ಶೌಚಾಲಯಗಳ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಒಂದು ಶೌಚಾಲಯ ನಿರ್ವಹಣೆಗೆ ಸರ್ಕಾರ ನೀಡುತ್ತಿರುವ ವಾರ್ಷಿಕ ಅನುದಾನ ಎಷ್ಟು;</td><td>ಸರ್ಕಾರಿ ಶಾಲೆಗಳ ಸಂಖ್ಯೆಗಳ ವಿವರ ಈ ಕೆಳಕಂಡಂತಿದೆ.
<table>
<tr><td>ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ</td><td>41905</td></tr>
<tr><td>ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ</td><td>4850</td></tr>
<tr><td>ಒಟ್ಟು</td><td>46755</td></tr>
</table>
<ul>
<li>46755 ಸರ್ಕಾರಿ ಶಾಲೆಗಳಲ್ಲಿಯೂ ಕನಿಷ್ಠ ಒಂದು ಶೌಚಾಲಯದ ವ್ಯವಸ್ಥೆ ಈಗಾಗಲೇ ಕಲ್ಪಿಸಲಾಗಿದೆ.</li>
<li>2022-23 ರಿಂದ 2024-25ನೇ ಸಾಲಿನವರೆಗೆ ಹೆಚ್ಚುವರಿ 5352 ಶಾಲಾ ಶೌಚಾಲಯಗಳನ್ನು ನಿರ್ಮಾಣ ಮಾಡುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.</li>
</ul>
ಸಮಗ್ರ ಶಿಕ್ಷಣ ಕರ್ನಾಟಕ ವತಿಯಿಂದ ಸರ್ಕಾರಿ ಶಾಲೆಗಳ ನಿರ್ವಹಣೆಗೆ ಮಕ್ಕಳ ದಾಖಲಾತಿಗೆ ಅನುಗುಣವಾಗಿ ರೂ. 10,000/-ಗಳಿಂದ 1,00,000/- ವರಗೆ ಘಟಕ ವೆಚ್ಚ ನಿಗದಿಪಡಿಸಲಾಗಿದೆ.<br>
ಅನುದಾನದ ಲಭ್ಯತೆಗನುಗುಣವಾಗಿ ಪ್ರತಿ ವರ್ಷ ಶಾಲಾನುದಾನ ಬಿಡುಗಡೆಗೊಳಿಸಲಾಗುತ್ತಿದೆ.<br><br>
2024-25ನೇ ಸಾಲಿಗೆ ರಾಜ್ಯವಲಯ ಯೋಜನೆಯಡಿ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆ ಮತ್ತು ಇತರೇ ನಿರ್ವಾಹಣೆಗಾಗಿ ಮಕ್ಕಳ ದಾಖಲಾತಿ ಸಂಖ್ಯೆಗನುಗುಣವಾಗಿ ರೂ.9250/-ಗಳಿಂದ ರೂ.22500/-ಗಳ ಘಟಕ ವೆಚ್ಚವನ್ನು ಮಂಜೂರು ಮಾಡಲಾಗಿದೆ. ಈವರೆಗೆ ತ್ರೈಮಾಸಿಕವಾರು ಸರ್ಕಾರದಿಂದ ಅನುದಾನ ಬಿಡುಗಡೆ ಆಧಾರದಲ್ಲಿ ರೂ.4420.09ಲಕ್ಷಗಳ ಅನುದಾನವನ್ನು ರಾಜ್ಯದ ಎಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ.</td></tr>
<tr><td>ಆ)</td><td>ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡದೆ ಮಕ್ಕಳಿಗೆ ಆರೋಗ್ಯ ಹಾಗೂ ಇನ್ನಿತರೆ ತೊಂದರೆಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?</td><td>ಬಂದಿಲ್ಲ.</td></tr>
</table>

ಇಪಿ 351 ಯೋಸಕ 2024

(ಎಸ್.ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು